■ ವೈಮಾನಿಕ ಕ್ಷೇತ್ರದಲ್ಲಿ ಸಂಶೋಧನೆ

# ಎನ್‌ಐಟಿಕೆ-ಎನ್‌ಎಎಲ್ ಒಡಂಬಡಿಕೆ ಸಾಧ್ಯತೆ



■ ಡಾ| ಉಪಾಧ್ಯ

ಮಂಗಳೂರು, ಡಿ. 29: ವೈಮಾನಿಕ ಕ್ಷೇತ್ರದಲ್ಲಿನ ಸಂಶೋಧನೆ ಮತ್ತು ಅಭಿವೃದ್ಧಿ ಕುರಿತಂತೆ ಸುರತ್ಕಲ್‌ನ ಎನ್‌ಐಟಿಕೆ ಹಾಗೂ ಬೆಂಗಳೂರಿನ ರಾಷ್ಟ್ರೀಯ ವೈಮಾನಿಕ ಪ್ರಯೋಗಾಲಯ (ಎನ್‌ಎಎಲ್) ಒಡಂಬಡಿಕೆ ಮಾಡಿಕೊಳ್ಳುವ ಚಿಂತನೆ ನಡೆದಿದೆ ಎಂದು ಎನ್‌ಎಎಲ್ ನಿರ್ದೇಶಕ ಡಾ. ಎ.ಆರ್. ಉಪಾಧ್ಯ ಇಂದಿಲ್ಲಿ ಹೇಳಿದರು.

ಎನ್‌ಐಟಿಕೆಯಲ್ಲಿ ಎನ್‌ಐಟಿಕೆ ಸುರತ್ಕಲ್ ಹಳೆ ವಿದ್ಯಾರ್ಥಿಗಳ ಸಂಘದ ನಾಲ್ಕನೇ ಜಾಗತಿಕ ಸಮ್ಮೇಳನ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು, ಈ ಸಂಬಂಧ ಈಗಾಗಲೇ ಎನ್‌ಐಟಿಕೆ ನಿರ್ದೇಶಕರೊಂದಿಗೆ ಚರ್ಚೆ ನಡೆಸಲಾಗಿದೆ. ವೈಮಾನಿಕ ಕ್ಷೇತ್ರದಲ್ಲಿನ ಸಂಶೋಧನೆ ಹಾಗೂ ಅಭಿವೃದ್ಧಿಯಲ್ಲಿ ನೆರವಾಗುವಂತೆ ಎನ್‌ಐಟಿಕೆಯನ್ನು ಕೋರಲಾಗಿದೆ ಯೆಂದು ನುಡಿದರು.

ಜಾಗತೀಕರಣದಿಂದ ವಿದ್ಯಾರಂಗವೂ ಇಂದು ವಿಶ್ವಕ್ಕೆ ತೆರೆದುಕೊಂಡಿದೆ. ಉದ್ಯೋಗಾವಕಾಶಗಳೂ ಹೆಚ್ಚಿಕೊಂಡಿದೆ. ಆದರೆ ಅದಕ್ಕೆ ಪೂರಕವಾಗಿ ನಮ್ಮ ವಿದ್ಯಾರ್ಥಿಗಳನ್ನು ಸಿದ್ಧಪಡಿಸಲಾಗುತ್ತಿದೆಯೇ ಎಂಬುದನ್ನು ಚಿಂತಿಸಬೇಕಿದೆ. ಶಿಕ್ಷಣ ಕುರಿತಂತೆ ವಿದ್ಯಾರ್ಥಿಗಳಿಗೆ ಈಗ ಹಿಂದೆಂದಿಗಿಂತಲೂ ಹೆಚ್ಚಿನ ಮಾಹಿತಿಗಳು ಲಭಿಸುತ್ತಿವೆ. ಹಾಗಾಗಿ ಅವರು ಅಷ್ಟೇ ಗೊಂದಲಕ್ಕೆ ಸಿಲುಕಿದ್ದಾರೆ. ಮಾಹಿತಿ ತಂತ್ರಜ್ಞಾನ ಕ್ಷೇತ್ರವನ್ನೂ ದಾಟಿ ಮುಂದಕ್ಕೆ ಸಾಕಷ್ಟು ಅವಕಾಶಗಳಿವೆ ಯೆಂಬುದನ್ನು ವಿದ್ಯಾರ್ಥಿ ವರ್ಗಕ್ಕೆ ತಿಳಿಸುವ ಕಾರ್ಯ ನಡೆಯಬೇಕಿದೆ ಎಂದರು.

ಶಿಕ್ಷಣವನ್ನು ಮುಗಿಸುವ ವಿದ್ಯಾರ್ಥಿಗಳಿಗೆ ಮುಂದೆ ಸ್ವಂತ ಉದ್ಯೋಗ ಕೈಗೊಳ್ಳಲು ಅನುಕೂಲವಾಗುವಂತೆ ಕಾಲೇಜು ಕ್ಯಾಂಪಸ್‌ನಲ್ಲೇ ಮಾರ್ಗದರ್ಶನ ಕೇಂದ್ರವೊಂದನ್ನು ತೆರೆಯಬೇಕು. ದೇಶದ ಪ್ರಮುಖ ಐಐಟಿಗಳಲ್ಲಿ ಈಗಾಗಲೇ ಇಂತಹ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಎಲ್ಲೆಡೆ ಶಿಕ್ಷಣ ಗುಣಮಟ್ಟದ ಬಗ್ಗೆ ಚರ್ಚೆ ನಡೆಯುತ್ತಿದೆ. ಆದರೆ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಒತ್ತು ದೊರೆಯುತ್ತಿಲ್ಲ ಎಂದು ಅವರು ವಿಷಾದಿಸಿದರು.

ಅತಿಥಿಗಳಾಗಿದ್ದ ಬ್ಯಾಂಕ್ ಆಫ್ ಮಹಾರಾಷ್ಟ್ರದ ಅಧ್ಯಕ್ಷ ಮತ್ತು ಆಡಳಿತ ನಿರ್ದೇಶಕ ಎಂ.ಡಿ. ಮಲ್ಯ ಅವರು ಮಾತನಾಡಿ, ವಿದ್ಯಾರ್ಥಿಗಳು ಇಂದು ಬರೇ ಮಾಹಿತಿ ತಂತ್ರಜ್ಞಾನ ಕ್ಷೇತ್ರ ಬಗ್ಗೆ ಒಲವು ತೋರುತ್ತಿದ್ದಾರೆ. ಅವರ ಜೀವನವೆಲ್ಲಾ ಕೋಡಿಂಗ್ ಹಾಗೂ ಡಿಕೋಡಿಂಗ್‌ನಲ್ಲೇ ಮುಗಿಯುತ್ತಿದೆ. ಆದರೆ ಅಗಾಧ ಅವಕಾಶಗಳಿರುವ ಸಂಶೋಧನೆ ಹಾಗೂ ಅಭಿವೃದ್ಧಿ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಯಾರೂ ಗಮನ ಹರಿಸುತ್ತಿಲ್ಲ ಎಂದು ವಿಷಾದಿಸಿದರು.

ಮತ್ತೋರ್ವ ಅತಿಥಿ ನೈಸ್ ಕಂಪೆನಿ ಆಡಳಿತ ನಿರ್ದೇಶಕ ಅಶೋಕ್ ಖೇಣಿ ಅವರು ಮಾತನಾಡಿ, ಎನ್‌ಐಟಿಕೆ ಕಟ್ಟಡ ನೀತಿ ಸಂಹಿತೆಯನ್ನು ಸಿದ್ಧಪಡಿಸಲು ಮುಂದಾದರೆ ಅಗತ್ಯವಿರುವಷ್ಟು ಆರ್ಥಿಕ ನೆರವನ್ನು ತಾನು ನೀಡುವುದಾಗಿ ಪ್ರಕಟಿಸಿದರು.

ಒಂದೊಂದು ಕಡೆಗಳಲ್ಲಿ ಒಂದೊಂದು ರೀತಿಯಲ್ಲಿ ಕಟ್ಟಡಗಳನ್ನು ನಿರ್ಮಿಸುತ್ತಾರೆ. ಅದಕ್ಕೊಂದು ನೀತಿ ಸಂಹಿತೆಯೆಂಬುದಿಲ್ಲ ಎಂದು ಅವರು ಹೇಳಿದರು.

ಎನ್‌ಐಟಿಕೆ ನಿರ್ದೇಶಕ ಸಂದೀಪ್ ಸಂಚೆತಿ ಉಪಸ್ಥಿತರಿದ್ದರು. ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷ ಕೆ. ಸತ್ಯನಾರಾಯಣ ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿ ಸುರೇಶ್ ಕುಮಾರ್ ಪೈ ಸ್ವಾಗತಿಸಿದರು.